## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.**

**ವಿಷಯ:** ರಾಜ್ಯ ಸರ್ಕಾರವು ದಿನಾಂಕ 19.08.2022ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯ ಆಧಾರದ ಮೇಲೆ ದಿನಾಂಕ:29.09.2022ರಂದು ತಕ್ಷಣದಿಂದಲೇ ಜಾರಿಗೆ ಬರುವಂತೆ ಅಧ್ಯಕ್ಷರ ಹಾಗೂ ಪಂಚಾಯತ್ ಸದಸ್ಯರ ಅಧಿಕಾರವನ್ನು ಮೊಟಕುಗೊಳಿಸಿ ಗ್ರಾಮ ಸ್ವರಾಜ್ಯದ ಆಶಯಗಳಿಗೆ ಕೊಡಲಿಯೇಟು ನೀಡುವ ಆದೇಶವೊಂದನ್ನು ಹೊರಡಿಸಿದೆ.

ಕೆಲ ಗ್ರಾಮ ಪಂಚಾಯಿತಿಗಳಲ್ಲಿ ಸಾಮಾನ್ಯ ಸಭೆ ಸಕಾಲದಲ್ಲಿ ನಡೆಯದ ನೆಪ ಮುಂದಿರಿಸಿ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ವಿತರಿಸಬೇಕಾದ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 64 ರಿಂದ 70 ಗಳಡಿ ನೀಡಲ್ಪಟ್ಟುವ ಪ್ರಮಾಣ ಪತ್ರಗಳು ಹಾಗೂ 9/11 ಮತ್ತು 11ಬಿ, ನಿರಾಕ್ಷೇಪಣಾ ಪತ್ರವನ್ನೂ ಸಾಮಾನ್ಯ ಸಭೆ ಅನುಮೋದನೆ ಇಲ್ಲದೆ ನೇರವಾಗಿ ಪಿಡಿಓಗಳು ವಿತರಿಸಿ ಮುಂದಿನ ಸಾಮಾನ್ಯ ಸಭೆಗೆ ಮಾಹಿತಿ ಒದಗಿಸಲು ಆದೇಶಿಸಲಾಗಿದೆ.

ಅದೇ ರೀತಿ ಚುನಾಯಿತ ಜನಪ್ರತಿನಿಧಿಗಳು ಹಣಕಾಸಿನ ವ್ಯವಹಾರಕ್ಕೆ ಉತ್ತರದಾಯಿತ್ವ ಹೊಂದಿಲ್ಲದಿರುವುದನ್ನು ನೆಪವಾಗಿರಿಸಿ ಹಣಕಾಸಿನ ವ್ಯವಹಾರವನ್ನು ಪಿಡಿಓ ಮತ್ತು ಲೆಕ್ಕ ಸಹಾಯಕರಿಗೆ ಜಂಟಿಯಾಗಿ ನೀಡವ ಕ್ರಮಗಳಿಗೆ ಮುಂದಾಗಿದೆ. ಅಧಿಕಾರ ವಿಕೇಂದ್ರೀಕರಣ ತತ್ವದಡಿಯಲ್ಲಿ ಸಂವಿಧಾನಕ್ಕೆ ಮಾಡಲಾಗಿರುವ 73 ಮತ್ತು 74ನೇ ತಿದ್ದುಪಡಿ ಮೂಲಕ ಅಸ್ತಿತ್ವಕ್ಕೆ ಬಂದಿರುವ ಪಂಚಾಯತ್ ರಾಜ್ ಸಂಸ್ಥೆಗಳ ಮೂಲ ಆಶಯಕ್ಕೆ ದಕ್ಕೆ ತರುವ ಈ ತಿದ್ದುಪಡಿಗಳನ್ನು ಹಿಂದಕ್ಕೆ ಪಡೆಯುವ ಅನಿವಾರ್ಯತೆಯ ಬಗ್ಗೆ.

***

**ಉತ್ತರ:** ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಅಧಿಕಾರವನ್ನು ಮೊಟಕುಗೊಳಿಸಿ ಸರ್ಕಾರದಿಂದ ಯಾವುದೇ ಆದೇಶವನ್ನು ಹೊರಡಿಸಿರುವುದಿಲ್ಲ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 62 ರಂತೆ ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಪ್ರಕಾರ್ಯಗಳು ಮತ್ತು ಅಧಿಕಾರಗಳ ಬಗ್ಗೆ ಮತ್ತು ಪ್ರಕರಣ 110 ಎ ರಲ್ಲಿ ಪಂಚಾಯತ್ ಸದಸ್ಯರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಬಗ್ಗೆ ತಿಳಿಸಲಾಗಿದ್ದು, ಅದರಂತೆ ಜವಾಬ್ದಾರಿಯನ್ನು ನಿರ್ವಹಿಸಬಹುದಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 ರಲ್ಲಿ ಗ್ರಾಮ ಪಂಚಾಯತಿಯು ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಲು, ಪ್ರಕರಣ 65 ರಲ್ಲಿ ಅನುಮತಿ ಇಲ್ಲದೆ ಕೆಲವು ಪ್ರದೇಶಗಳಲ್ಲಿ ಕಟ್ಟಡಗಳ ನಿರ್ಮಾಣವನ್ನು ನಿಷೇಧಿಸಲು ಮತ್ತು ನಿಯಂತ್ರಿಸಲು, ಪ್ರಕರಣ 66 ರಲ್ಲಿ ಅನುಮತಿ ಪಡೆದು ಕಾರ್ಖಾನೆಗಳನ್ನು ನಿರ್ಮಿಸಲು ಮತ್ತು ಯಂತ್ರೋಪಕರಣಗಳನ್ನು ಸ್ಥಾಪಿಸಲು, ಪ್ರಕರಣ 67 ರಲ್ಲಿ ಲೈಸೆನ್ಸ್ ಇಲ್ಲದೆ ಉಪದ್ರವಕಾರಿ ಅಥವಾ ಅಪಾಯಕಾರಿ ವ್ಯಾಪರದ ನಿಷೇಧ, ಪ್ರಕರಣ 68

ರಲ್ಲಿ ಹೋಟೆಲ್ ಮುಂತಾದವುಗಳ ನಿಯಂತ್ರಣ, ಪ್ರಕರಣ 69 ರಲ್ಲಿ ಅಂಗಡಿಗಳಿಗೆ ಲೈಸೆನ್ಸ್ ಕೊಡುವುದು ಮತ್ತು ಪ್ರಕರಣ 70 ರಲ್ಲಿ ಅನುಮತಿಗಳಿಗೆ ಮತ್ತು ಲೈಸೆನ್ಸ್‌ಗಳಿಗೆ ಅನ್ವಯವಾಗುವ ಉಪಬಂಧಗಳ ಬಗ್ಗೆ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ ಗ್ರಾಮ ಪಂಚಾಯತಿಯು ಕರ್ತವ್ಯವನ್ನು ನಿರ್ವಹಿಸಬಹುದಾಗಿರುತ್ತದೆ.

ಇ-ಸ್ವತ್ತು ತಂತ್ರಾಂಶದ ಮೂಲಕ ತೆರಿಗೆ ನಿರ್ಧರಣೆ ಪಟ್ಟಿ (ನಮೂನೆ-9, 11ಎ ಮತ್ತು 11ಬಿ) ಗಳನ್ನು ವಿತರಿಸಲು ಪ್ರಸ್ತುತ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಮೂನೆಗಳಲ್ಲಿ ಗ್ರಾಮ ಪಂಚಾಯತಿ ನಿರ್ಣಯ ಸಂಖ್ಯೆ ಮತ್ತು ದಿನಾಂಕ ನಮೂದಿಸಲು ಅವಕಾಶವಿದ್ದು, ಅದರಂತೆ ಗ್ರಾಮ ಪಂಚಾಯತಿಗಳು ಸಭೆ ನಡೆಸಿ ಅನುಮೋದನೆ ಪಡೆದು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆಗಳನ್ನು ವಿತರಿಸಬಹುದಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರಲ್ಲಿ ಗ್ರಾಮ ಪಂಚಾಯತಿಯ ಹಣಕಾಸಿನ ವ್ಯವಹಾರವನ್ನು ಸರ್ಕಾರ ಅಧಿಸೂಚಿಸುವ ಅಧಿಕಾರಿ ಅಥವಾ ಪ್ರಾಧಿಕಾರ ನಿರ್ವಹಿಸಲು ಉಪಬಂಧವಿದ್ದು, ಅದರಂತೆ ಅಧಿಸೂಚನೆ ಮೂಲಕ ಗ್ರಾಮ ಪಂಚಾಯತಿಯ ಹಣಕಾಸಿನ ವ್ಯವಹಾರವನ್ನು ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಜಂಟಿಯಾಗಿ ನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ: ಗ್ರಾಅಪ 367 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ